ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ: DEPARTMENT / SUBJECT: Reg. bi-election
ಪತ್ರಿಕೆಯ ಹೆಸರು : NAME OF THE NEWS PAPER : Prajavani
ದಿನಾಂಕ : DATE : 28.11.2019

# ‘ಅನರ್ಹ’ರಿಗೆ ಮತದಾರರ ತರಾಟೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳಾಗಿ ಕಣಕ್ಕೆ ಇಳಿದಿರುವ ‘ಅನರ್ಹ’ ಶಾಸಕರು ಮತ ಯಾಚಿಸಲು ಹೋದ ಹಳ್ಳಿಗಳಲ್ಲಿ ತಮ್ಮ ಹಿಂದಿನ ಪಕ್ಷದ ಕಾರ್ಯಕರ್ತರು ಹಾಗೂ ಗ್ರಾಮಸ್ಥರಿಂದ ಆಕ್ರೋಶಕ್ಕೆ ತುತ್ತಾಗುತ್ತಿದ್ದಾರೆ.

ಅಥಣಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಮಹೇಶ ಕುಮಠಳ್ಳಿ ಪರ ಮತ ಯಾಚಿಸಲು ಝುಂಜರವಾಡಕ್ಕೆ ಬುಧವಾರ ಭೇಟಿ ನೀಡಿದ್ದ ಜಿಲ್ಲಾ ಪಂಚಾಯಿತಿ ಸದಸ್ಯ ಸಿದ್ದಪ್ಪ ಮುದುಕಣ್ಣವರ ಅವರನ್ನು ನೆರೆ ಸಂತ್ರಸ್ತರು ಕೆಲಹೊತ್ತು ಶೆಡ್‌ನಲ್ಲಿ ಕೂಡಿ ಹಾಕಿದ ಘಟನೆಯೂ ನಡೆದಿದೆ. ಯಲ್ಲಾಪುರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶಿವರಾಮ ಹೆಬ್ಬಾರ್ ಅವರಿಗೆ ಅಜ್ಜರಣಿ ಗ್ರಾಮದಲ್ಲಿ ಪ್ರಚಾರ ಮಾಡಲು ಅಲ್ಲಿನ ಕಾಂಗ್ರೆಸ್ ಕಾರ್ಯಕರ್ತರು ಬಿಡಲಿಲ್ಲ. ಇದಕ್ಕೆ ಬಿಜೆಪಿ ಕಾರ್ಯಕರ್ತರು ದನಿಗೂಡಿಸಿದ್ದಾರೆ.

ಹೆಬ್ಬಾರ್ ಅವರನ್ನು ಸುತ್ತುವರಿದ ಕಾಂಗ್ರೆಸ್ ಕಾರ್ಯಕರ್ತರು, ‘ಸ್ವಾರ್ಥಕ್ಕಾಗಿ ಬಿಜೆಪಿಗೆ ಹೋಗಿದ್ದೀರಿ, ಹೇಗೆ ನಿಮಗೆ ಮತ ಕೊಡುವುದು’ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

ಹುಣಸೂರು ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿಶ್ವನಾಥ್ ಅವರು ಶ್ರವಣನಹಳ್ಳಿಯಲ್ಲಿ ಪ್ರಚಾರಕ್ಕೆ ಹೋದಾಗ, ‘ಅಧಿಕಾರದಲ್ಲಿದ್ದಾಗ ಒಮ್ಮೆಯೂ ನಮ್ಮೂರಿಗೆ ಬಂದಿರಲಿಲ್ಲ. ಈಗ ಏಕೆ ಬಂದಿದ್ದೀರಿ. ನಿಮಗೆ ನಾವು ಏಕೆ ಮತ ಹಾಕಬೇಕು’ ಎಂದು ಹರಿಹಾಯ್ದ ಗ್ರಾಮಸ್ಥರು,. ಪ್ರಚಾರ ಸಭೆಯನ್ನು ನಡೆಸಲು ಬಿಡಲಿಲ್ಲ.

ಕೆ.ಆರ್. ಪೇಟೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ನಾರಾಯಣಗೌಡ ವಿರುದ್ಧ ನಾಮಪತ್ರ ಸಲ್ಲಿಕೆ ದಿನವೇ ಜೆಡಿಎಸ್ ಕಾರ್ಯಕರ್ತರ ಸಿಟ್ಟು ಕಟ್ಟೆಯೊಡೆದಿತ್ತು. ಕಿಕ್ಕೇರಿಯಲ್ಲಿ ಪ್ರಚಾರ ಸಭೆ ನಡೆಸುತ್ತಿದ್ದ ವೇಳೆ ನಾರಾಯಣಗೌಡರ ವಿರುದ್ಧ ಧಿಕ್ಕಾರ ಕೂಗಿದ ಘಟನೆ ನಡೆದಿದೆ.

ರಾಜಕೀಯ ಸುದ್ದಿಗಳು 4

## ಹೊಸಕೋಟೆ: ಹಲ್ಲೆ ರಾಜಕೀಯ

ಹೊಸಕೋಟೆ: ‘ತಾಲ್ಲೂಕಿನ ಖಾಜಿಹೊಸಹಳ್ಳಿ ಗ್ರಾಮದಲ್ಲಿ ಬಿಜೆಪಿ ಕಾರ್ಯಕರ್ತ ರಾಮಚಂದ್ರಾಚಾರಿ ಮೇಲೆ ಪಕ್ಷೇತರ ಅಭ್ಯರ್ಥಿ ಶರತ್ ಬಚ್ಚೇಗೌಡರ ಬೆಂಬಲಿಗರಾದ ರಾಮಚಂದ್ರ, ಮುನಿರಾಜು, ಮಂಜುನಾಥ ಎಂಬುವರು ಹಲ್ಲೆ ನಡೆಸಿದ್ದಾರೆ’ ಎಂದು ಬಿಜೆಪಿ ಅಭ್ಯರ್ಥಿ ಎಂ.ಟಿ.ಬಿ. ನಾಗರಾಜ್ ಅವರು ಆಪಾದಿಸಿದ್ದಾರೆ.

‘ನನ್ನ ಬೆಂಬಲಿಗರು ಹಲ್ಲೆ ನಡೆಸಿಲ್ಲ. ಸೋಲುವ ಭಯದಿಂದ ಹತಾಶರಾಗಿರುವ ಎಂ.ಟಿ.ಬಿ. ನಾಗರಾಜ್ ಸುಳ್ಳು ಆರೋಪ ಮಾಡುತ್ತಿದ್ದಾರೆ. ನಾನು ನ್ಯಾಯದ ಪರ ಇದ್ದೇನೆ. ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ’ ಎಂದು ಶರತ್ ಬಚ್ಚೇಗೌಡ ಪ್ರತಿಪಾದಿಸಿದ್ದಾರೆ.

ರಾಮಚಂದ್ರಾಚಾರಿ ಮೇಲೆ ಕಬ್ಬಿಣದ ಸರಳಿನಿಂದ ಹಲ್ಲೆ ನಡೆದಿದ್ದು, ಅವರ ತಲೆಗೆ ಗಾಯವಾಗಿದೆ. ಗಾಯಾಳುವನ್ನು ಇಲ್ಲಿನ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.